## ಕರ್ನಾಟಕ ಸರ್ಕಾರ

ವಿಷಯ: ಶ್ರೀ ಎಲ್. ಮೇಘನಾಯ್ಕ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ. ಹೂವಿನಹಡಗಲಿ ಇವರ ವಿರುದ್ಧದ ಇಲಾಖಾ ವಿಚಾರಣೆ- ಅಂತಿಮ ಆದೇಶ ಬಗ್ಗೆ.

ಓದಲಾಗಿದೆ: 1. ಕಾರಣ ಕೇಳುವ ನೋಟೀಸ ಸಂಖ್ಯೆ: ಗ್ರಾಅಪ:176:ಪಬವ:2012 ದಿನಾಂಕ:05-11-2012.
2. ಶ್ರೀ ಎಲ್. ಮೇಘನಾಯ್ಕ, ಇವರ ಲಿಖಿತ ಹೇಳಿಕೆ ದಿ:27-08-2012.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 176 ಪಬವ 2012 ದಿ:05-01-2011.
4. ವಿಚಾರಣಾಧಿಕಾರಿಯವರ ವಿಚಾರಣಾ ವರದಿ ದಿ:06-12-2014

-----

ಪ್ರಸ್ತಾವನೆ:

ಶ್ರೀ ಹೆಚ್. ನೀಲಪ್ಪ, ತಹಶೀಲ್ದಾರ್, ಹೂವಿನಹಡಗಲಿ ಇವರು ಹೂವಿನಹಡಗಲಿ ಶಾಸಕರ ಸೂಚನೆ ಮೇರೆಗೆ ದಿನಾಂಕ:01-05-2012 ರಂದು ಅವರ ಮನೆಗೆ ತೆರಳಿ, ಮೈಲಾರ ಗ್ರಾಮ ಪಂಚಾಯತಿಯ ಅಧ್ಯಕ್ಷರ ಚುನಾವಣೆ ಕುರಿತು ಹೂವಿನಹಡಗಲಿ ಶಾಸಕರೊಂದಿಗೆ ಚರ್ಚಿಸುವ ಸಮಯದಲ್ಲಿ ತಹಶೀಲ್ದಾರ್ ಮತ್ತು ತಾಲ್ಲೂಕಿನ ದಂಡಾಧಿಕಾರಿಗಳಾದ ಶ್ರೀ ಎಲ್. ಮೇಘನಾಯ್ಕ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ. ಹೂವಿನಹಡಗಲಿ ಇವರು ಅವ್ಯಾಚ್ಯ ಶಬ್ದಗಳಿಂದ ನಿಂದಿಸಿರುವುದಲ್ಲದೆ ಅವರ ಮೇಲೆ ಹಲ್ಲೆಗೆ ಪ್ರಯತ್ನಿಸಿದ ಆರೋಪದ ಮೇಲೆ ಇವರ ವಿರುದ್ಧ ಐಪಿಸಿ ಕಲಂ 353, 342, 323, 504, 34 ರ ಪ್ರಕಾರ ಮೊಕದ್ದಮೆ ದಾಖಲಾಗಿದ್ದು, ಎಫ್ಐಆರ್ ಸಂಖ್ಯೆ: 35/2012 ನ್ನು ನ್ಯಾಯಾಲಯದಲ್ಲಿ ಸಲ್ಲಿಸಿರುವ ಆರೋಪಗಳಿಗೆ ಸಂಬಂಧಿಸಿದಂತೆ, ಸದರಿ ಅಧಿಕಾರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ಮತ್ತು ನಿಯಂತ್ರಣ ಮೇಲ್ಮನವಿ) 1957ರ ನಿಯಮ 11 ರಡಿ ಶಿಸ್ತು ಕ್ರಮ ಜರುಗಿಸಲು ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣೆ ಪಟ್ಟಿ ಅನುಬಂಧ-1 ರಿಂದ 4ನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಜಾರಿ ಮಾಡಲಾಗಿತ್ತು. ಸದರಿ ನೋಟೀಸಿಗೆ ಆರೋಪಿತ ಅಧಿಕಾರಿಯು ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸುತ್ತ ಅವರ ವಿರುದ್ಧದ ಆರೋಪಗಳನ್ನು ನಿರಾಕರಿಸಿ ಇಲಾಖಾ ವಿಚಾರಣೆಯಿಂದ ದೋಷಮುಕ್ತಗೊಳಿಸಬೇಕೆಂದು ಕೋರಿರುತ್ತಾರೆ. ಆರೋಪಿತ ಅಧಿಕಾರಿಯು ಸಲ್ಲಿಸಿರುವ ವಿವರಣೆಯು ಸಮರ್ಥನೀಯವಾಗಿಲ್ಲದ ಕಾರಣ ಇವರ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು ಕೂಲಂಕಷ ಇಲಾಖಾ ವಿಚಾರಣೆಯನ್ನು ನಡೆಸಲು ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಶ್ರೀ ಫ.ನಿ.ಗುಡ್ಡಾಕಾರ, ನಿವೃತ್ತ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯಾಗಿ ನೇಮಿಸಲಾಗಿತ್ತು. ವಿಚಾರಣಾಧಿಕಾರಿಯವರು, ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ವಿಚಾರಣಾಧಿಕಾರಿಯವರು ಸಾಕ್ಷಿ ಹೇಳಿಕೆ, ಶಿಸ್ತು ಪ್ರಾಧಿಕಾರ, ಹಾಜರು ಪಡಿಸಿದ ಸಾಕ್ಷಿ ಪುರಾವೆಗಳು, ಹಾಗೂ ಆರೋಪಿತ ಅಧಿಕಾರಿ ಪರ ಮೂಡಿಬಂದ ಸಾಕ್ಷಿ/ಪುರಾವೆಗಳನ್ನು ಒಂದನ್ನೊಂದು ತುಲನಾತ್ಮಕ ದೃಷ್ಟಿಯಿಂದ ಪರಿಶೀಲಿಸಿ, ಶಿಸ್ತು ಪ್ರಾಧಿಕಾರ ಅಪಾದಿತ ಅಧಿಕಾರಿ ವಿರುದ್ಧ ಮಾಡಿರುವ ಆರೋಪದಲ್ಲಿ ಯಾವುದೇ ಸತ್ಯಾಂಶವಿಲ್ಲದಿರುವುದು ಕಂಡು ಬರುವುದರಿಂದ ಹಾಗೂ ಮಂಡನಾಧಿಕಾರಿಯವರು ಆಪಾದಿತರ ವಿರುದ್ಧದ ಆರೋಪಗಳನ್ನು ಸಮರ್ಥಿಸುವ ಸಂಗತಿಗಳನ್ನು ನಿಸ್ಸಂದೇಹವಾಗಿ ಮತ್ತು ನಿಚ್ಚಳವಾಗಿ ರುಜುವಾತುಪಡಿಸಿರುವುದಿಲ್ಲವೆಂದು ವಿಚಾರಣಾ ವರದಿಯನ್ನು ಸಲ್ಲಿಸಿರುತ್ತಾರೆ. ವಿಚಾರಣಾಧಿಕಾರಿಗಳು ಸಲ್ಲಿಸಿರುವ ವಿಚಾರಣಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 176 ಪಬವ 2012 ಬೆಂಗಳೂರು, ದಿನಾಂಕ:15-05-2015.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಎಲ್. ಮೇಘನಾಯ್ಕ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ. ಹೂವಿನಹಡಗಲಿ ಇವರ ವಿರುದ್ಧ ಕರ್ನಾಟಕ

ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11 ರಡಿಯಲ್ಲಿ ದಿನಾಂಕ:05-11-2012 ರ ಕಾರಣ ಕೇಳುವ ನೋಟೀಸಿನಲ್ಲಿ ಮಾಡಿರುವ ಆರೋಪಗಳಿಂದ ದೋಷಮುಕ್ತಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಹನುಮಂತಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇ.ಬಿ&ಸಿ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಜಿಲ್ಲಾಧಿಕಾರಿ, ಬಳ್ಳಾರಿ ಜಿಲ್ಲೆ, ಬಳ್ಳಾರಿ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ.
4. ಸಂಬಂಧಿಸಿದ ಅಧಿಕಾರಿಗೆ (ಮುಕಾನಿಅ ಜಿಲ್ಲಾ ಪಂಚಾಯತಿ, ಬಳ್ಳಾರಿ ಇವರ ಮುಖಾಂತರ)
5. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) /ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
6. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
7. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.

GO